# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☏:0816-2255650,2273511 ಫ್ಯಾಕ್ಸ್:0816-2270719

ಸಂಖ್ಯೆ:ತುವಿ:ಪವಿ:2024-25: 1078 ದಿನಾಂಕ:30.01.2025

ಗೆ,

ಎಲ್ಲಾ ಪ್ರಾಂಶುಪಾಲರುಗಳು
ಘಟಕ/ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು.

**ವಿಷಯ** : 2018-19 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿ ವಿದ್ಯಾರ್ಥಿಗಳು ಮತ್ತೊಮ್ಮೆ ಮರುಪರೀಕ್ಷೆ ನೀಡುವಂತೆ ಕೋರಿರುವುದಕ್ಕೆ ಸಂಬಂಧಿಸಿದ್ದರ ಬಗ್ಗೆ.

**ಉಲ್ಲೇಖ** : ಸರ್ಕಾರದ ಪತ್ರ ಸಂಖ್ಯೆ:ಇ.ಸಂ:ಇಡಿ 01 ಯುಟಿಐ 2025 ದಿನಾಂಕ:20.01.2025

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರು ತುಮಕೂರು ವಿಶ್ವವಿದ್ಯಾನಿಲಯಕ್ಕೆ ಉಲ್ಲೇಖಿತ ಪತ್ರ ಸಲ್ಲಿಸಿ ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಎಲ್ಲಾ ಸ್ನಾತಕ ಪದವಿ ಕಾಲೇಜುಗಳಲ್ಲಿನ 2018-19 ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ ಮತ್ತೊಮ್ಮೆ ಪರೀಕ್ಷೆ ನೀಡುವ ಸಂಬಂಧ ನಿಯಮಾನುಸಾರ ಪರಿಶೀಲಿಸಿ ಈ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸಿ ಕೈಗೊಂಡ ಕ್ರಮದ ಬಗ್ಗೆ ಅರ್ಜಿದಾರರಿಗೆ ನೇರವಾಗಿ ಮಾಹಿತಿ ನೀಡುವಂತೆ ತಿಳಿಸಿರುತ್ತಾರೆ.

ತತ್ಸಂಬಂಧ ಸದರಿ ಪತ್ರವನ್ನು ಪರಿಶೀಲಿಸಲಾಗಿದ್ದು ತುಮಕೂರು ವಿಶ್ವವಿದ್ಯಾನಿಲಯದ ಸಿ.ಬಿ.ಸಿ.ಎಸ್. [C.B.C.S.-Choice Based Credit System] ವಿನಿಯಮದ ಪ್ರಕರಣ (7.2) ರಲ್ಲಿ ಕೆಳಕಂಡಂತೆ ಉಲ್ಲೇಖಿಸಲಾಗಿರುತ್ತದೆ.

"A student shall complete the Programme successfully wihin a maximum period of 06 (six) years from the date of admission and registration to first semester".

ಈ ಹಿನ್ನೆಲೆಯಲ್ಲಿ 2018-19 ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕ ಪದವಿಗಳ ಪ್ರಥಮ ಸೆಮಿಸ್ಟರ್‌ಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದ ಸಿ.ಬಿ.ಸಿ.ಎಸ್. ವಿನಿಯಮದನ್ವಯ ಪದವಿ ಪೂರ್ಣಗೊಳಿಸುವ ಕಾಲಾವಧಿ ಪೂರ್ಣಗೊಂಡಿರುತ್ತದೆ. ಈ ಸಂಬಂಧ ಮುಂದಿನ ದಿನಗಳಲ್ಲಿ ಸದರಿ ವಿಷಯವನ್ನು ವಿಶ್ವವಿದ್ಯಾನಿಲಯದ ಸಕ್ಷಮ ಪ್ರಾಧಿಕಾರಗಳ ಗಮನಕ್ಕೆ ತರಲಾಗುವುದು ಎಂಬುದನ್ನು ತಮ್ಮ ಕಾಲೇಜುಗಳಲ್ಲಿ 2018-19 ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡಿ ಅನುತ್ತೀರ್ಣಗೊಂಡಿರುವ ಎಲ್ಲಾ ವಿದ್ಯಾರ್ಥಿಗಳಿಗೆ ತಿಳಿಸುವಂತೆ ಈ ಮೂಲಕ ತಮಗೆ ಸೂಚಿಸಲಾಗಿದೆ.

31/1/25

ಕುಲಸಚಿವರು(ಪರೀಕ್ಷಾಂಗ)
ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
(ಪ್ರ.ತ.ನೋ.)
ತುಮಕೂರು

**ಪ್ರತಿಗಳು:**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಇ-ಮೇಲ್ ಕಳುಹಿಸುವುದು.**
6. ಕಛೇರಿ ಪ್ರತಿ.